# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75.
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-10/2022-23 ದಿನಾಂಕ: 30/08/2022

-:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 20/08/2022 ಶನಿವಾರದಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಬೆನಕೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ಬೆನಕೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಯಲ್ಲಿ ಹಾಜರಿದ್ದವರು:-**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಬೆನಕೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀ ರಾಜಗೋಪಾಲ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 4 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 5 | ಶ್ರೀ ಲೋಕೇಶ್ ಹೆಚ್.ಎಸ್. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ -75, ಬಿಬಿಎಂಪಿ. |
| 6 | ಶ್ರೀಮತಿ ಉಮಾದೇವಿ ಹೆಚ್. ಪಿಹೆಚ್‌ಸಿಓ, ಆರೋಗ್ಯ ಕೇಂದ್ರ, ವಾರ್ಡ್-75, ಬಿಬಿಎಂಪಿ. |
| 7 | ಶ್ರೀ ನಿರಂಜನ್, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 8 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ವಾರ್ಡ್-75, ಬಿಬಿಎಂಪಿ. |
| 9 | ಶ್ರೀ ಕೆಂಪಯ್ಯ, ಮೇಸ್ತ್ರಿ, ಘನತ್ಯಾಜ್ಯ ವಿಭಾಗ, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಮಲ್ಲಪ್ಪ, ಮೇಸ್ತ್ರಿ, ಅರಣ್ಯ ವಿಭಾಗ, ಬಿಬಿಎಂಪಿ. |
| 11 | ಶ್ರೀ ಮಂಜು ಸಿ, ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 12 | ಶ್ರೀ ಪುಟ್ಟಸ್ವಾಮಿ, ಉದ್ಯಾನವನಗಳ ನಿರ್ವಹಣೆ ಗುತ್ತಿಗೆದಾರರು, ತೋಟಗಾರಿಕೆ ವಿಭಾಗ, ವಾರ್ಡ್-75, ಬಿಬಿಎಂಪಿ. |
| 13 | ಶ್ರೀ ಮನೋಜ್, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ವಿದ್ಯುತ್ ವಿಭಾಗ, ವಾರ್ಡ್-75, ಬಿಬಿಎಂಪಿ. |
| 14 | ಶ್ರೀ ಹೆಚ್. ರಮೇಶ್, ಕಿರಿಯ ಅಭಿಯಂತರರು, ಎನ್-7 ಉಪವಿಭಾಗ, ಬೆಸ್ಕಾಂ. |
| 15 | ಶ್ರೀ ಬರಡೀ ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-I, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 16 | ಶ್ರೀ ಮಂಜುನಾಥ್, ಎ.ಎಸ್.ಐ. ವಿಜಯನಗರ ಸಂಚಾರಿ ಪೊಲೀಸ್ ಠಾಣೆ. |
| 17 | ಶ್ರೀ ಪ್ರವೀಣ್, ಪಿ.ಸಿ. ರಾಜಾಜಿನಗರ ಸಂಚಾರಿ ಪೊಲೀಸ್ ಠಾಣೆ. |
| 18 | ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 19 | ಶ್ರೀ ನಾಗರಾಜ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 20 | ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು, ವಾರ್ಡ್-75. |

ಮು.ತಿ.ನೋ.

Scanned by CamScanner

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-

1. **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳು ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀಮತಿ ಉಮಾದೇವಿ ಹೆಚ್., ಪಿ.ಹೆಚ್.ಸಿ.ಓ, ವಾರ್ಡ್-75, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರಿಗೆ ಕೋವಿಡ್-19 ಲಸಿಕೆ ಬೂಸ್ಟರ್ ಡೋಸ್ ಪ್ರಾರಂಭಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

2. **ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀ ನಾಗರಾಜ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕಿರ್ಲೋಸ್ಕರ್ ಕಾಲೋನಿ 1ನೇ ಹಂತದ ರಸ್ತೆಗಳಲ್ಲಿ ಹೊಸದಾದ ಆರ್.ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿಯು ನಡೆಯುತ್ತಿದ್ದು, ಎಲ್ಲಾ ಕಡೆ ಶೋಲ್ಡರ್ ಡ್ರೇನ್ ನಿರ್ಮಾಣ ಮಾಡಿಕೊಡಬೇಕಾಗಿ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ಸ್ಥಳವನ್ನು ಪರಿಶೀಲಿಸಿ ಚರಂಡಿ ನಿರ್ಮಾಣ ಮಾಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ನಾಗರಾಜ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕೊರ್ಲೋಸ್ಕರ್ ಕಾಲೋನಿಯಲ್ಲಿರುವ ಬ್ಯಾಡ್ಮಿಂಟನ್ ಕೋರ್ಟ್‌ನಲ್ಲಿ ಕರೆಂಟ್ ಹೋದಾಗ ಜನರೇಟರ್ ವ್ಯವಸ್ಥೆ ಇರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಸಹಾಯಕ ಅಭಿಯಂತರರು ವಾರ್ಡ್-75 ರವರು ಮಾತನಾಡುತ್ತಾ, ಬ್ಯಾಡ್ಮಿಂಟನ್ ಕೋಟ್ ಆವರಣವನ್ನು ಪರಿಶೀಲಿಸಿ ಅವಶ್ಯವಿರುವ ಅಂಶಗಳನ್ನು ಅಂದಾಜುಪಟ್ಟಿಯಲ್ಲಿ ಪರಿಗಣಿಸಿಕೊಂಡು ಮುಂದಿನ ಅನುದಾನದಲ್ಲಿ ಕಾಮಗಾರಿಯನ್ನು ಸೇರಿಸಿಕೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

3. **ಪಶುಪಾಲನೆ ವಿಭಾಗದ ಬಗ್ಗೆ:-**

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತವೆ, ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

4. **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.
- ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 2022-23ನೇ ಸಾಲಿನಲ್ಲಿ 01-ಏಪ್ರಿಲ್-2022 ರಿಂದ ಇಲ್ಲಿಯವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 4.30 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

5. **ಅರಣ್ಯ ವಿಭಾಗದ ಬಗ್ಗೆ:-**

- ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕಿರ್ಲೋಸ್ಕರ್ ಕಾಲೋನಿ 3ನೇ ಹಂತ 6ನೇ ಅಡ್ಡರಸ್ತೆಯಲ್ಲಿ ಮರದ ರೆಂಬೆಗಳನ್ನು ತೆರವುಗೊಳಿಸಿಕೊಡಬೇಕಾಗಿ ಸಭೆಯಲ್ಲಿ ಕೋರಿದರು.
- ಶ್ರೀ ಮಂಜುನಾಥ್ ಆರ್, ವಾರ್ಡ್‌ನ ನಾಗರೀಕರುರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಉದ್ಯಾನವನಗಳಲ್ಲಿ ವಾಕಿಂಗ್ ಟ್ರಾಕ್‌ನಲ್ಲಿ ಓಡಾಡುವವರ ತಲೆಗೆ ಮರದ ರೆಂಬೆಗಳು ತಾಕುತ್ತಿರುವುದರಿಂದ ಸಾರ್ವಜನಿಕರಿಗೆ ವಾಕ್ ಮಾಡಲು ಆಗುತ್ತಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಶೀಘ್ರವಾಗಿ ಸದರಿ ಸ್ಥಳವನ್ನು ಪರಿಶೀಲಿಸಿ ತೆರವುಗೊಳಿಸಲು ಸೂಕ್ತ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಅರಣ್ಯ ವಿಭಾಗದ ಮೇಸ್ತ್ರಿ ಶ್ರೀ ಮಲ್ಲಪ್ಪ ರವರಿಗೆ ತಿಳಿಸಿದರು.

ಮು.ತಿ.ನೋ.

Scanned by CamScanner

6. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಭಾಗ್ಯದ ಬಾಗಿಲು ರಸ್ತೆಯಲ್ಲಿ ಹೆಚ್ಚಾಗಿ ಕಸ ಬೀಳುತ್ತಿದ್ದು, ಕಸವನ್ನು ಸರಿಯಾಗಿ ತೆರವುಗೊಳಿಸಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳನ್ನು ಸರಿಯಾಗಿ ನಿರ್ವಹಣೆ ಮಾಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ನಿರಂಜನ್, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

7. <u>ತೋಟಗಾರಿಕೆ ವಿಭಾಗದ ಬಗ್ಗೆ:-</u>

- ಶ್ರೀ ಮಂಜುನಾಥ್ ಆರ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಸಾಂಬವಮೂರ್ತಿ ಉದ್ಯಾನವನದಲ್ಲಿ ಸೆಕ್ಯುರಿಟಿ ಒಬ್ಬರನ್ನು ನೇಮಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಉದ್ಯಾನವನಗಳನ್ನು ಪರಿಶೀಲಿಸಿ ಸೆಕ್ಯುರಿಟಿಗಳನ್ನು ಅಳವಡಿಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಅಭಿಯಂತರರಿಗೆ ತಿಳಿಸಿದರು.

8. <u>ವಿದ್ಯುತ್ ವಿಭಾಗದ ಬಗ್ಗೆ:-</u>

- ಶ್ರೀ ನಾಗರಾಜ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕಿರ್ಲೋಸ್ಕರ್ ಕಾಲೋನಿ 1ನೇ ಹಂತದ ಬೀದಿಗಳಲ್ಲಿ ಎಲ್ಲಾ ಕಂಬಗಳಲ್ಲಿಯೂ ಬೀದಿ ದೀಪಗಳು ಇರುವುದಿಲ್ಲ ಹಾಗೂ ಕೆಲವು ಕಡೆ ಹೊಸ ಕಂಬಗಳನ್ನು ಅಳವಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸಂಭಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

9. <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಶ್ರೀ ಲಕ್ಷ್ಮೀಪತಿ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಮಳೆ ಗಾಳಿ ಬಂದರೆ ಸಾಕು ವಿದ್ಯುತ್ ಕಟ್ ಮಾಡುತ್ತಿರುತ್ತಾರೆ, ಈ ಬಗ್ಗೆ ದೂರು ನೀಡಲು ಕರೆ ಮಾಡಿದ್ದಲ್ಲಿ ಯಾವುದೇ ಅಧಿಕಾರಿಗಳು ಸ್ಪಂದಿಸುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ಶ್ರೀ ಶಂಕರ್ ರಾಜ್, ಸಹಾಯಕ ಅಭಿಯಂತರರು, ಎನ್-3 ಉಪವಿಭಾಗ, ಬೆಸ್ಕಾಂ, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕಕ್ಕೆ ಸಂಭಂಧಿಸಿದಂತೆ ದೂರುಗಳನ್ನು ನೀಡಲು ಬಸವೇಶ್ವರನಗರದ ಸ್ಥಳೀಯ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ 9449844704 ಗೆ ಸಂಪರ್ಕಿಸಿ ದೂರು ನೀಡಿದ್ದಲ್ಲಿ ಶೀಘ್ರವಾಗಿ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

10. <u>ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-</u>

- ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಲಾವಣ್ಯ ಸ್ಟೋರ್ ಜಂಕ್ಷನ್ ಬಳಿಯಲ್ಲಿ ಮಳೆ ಜೋರಾಗಿ ಬಂದಾಗ ನೀರಿನ ರಭಸಕ್ಕೆ ಮ್ಯಾನ್‌ಹೋಲ್‌ಗಳ ಕವರಿಂಗ್ ಸ್ಲಾಬ್‌ಗಳು ಸರಿದುಹೋಗುತ್ತವೆ. ಇದರಿಂದಾಗಿ ಕೊಳಚೆ ನೀರು ಸುತ್ತಲಿನ ಮನೆಗಳಿಗೆ ನುಗ್ಗುತ್ತವೆ ಹಾಗೂ ರಸ್ತೆಯಲ್ಲಿ ಈ ವೇಳೆಯಲ್ಲಿ ಸಂಚರಿಸುವ ವಾಹನಗಳು ಅಥವಾ ಸಾರ್ವಜನಿಕರಿಗೆ ಮ್ಯಾನ್‌ಹೋಲ್‌ಗಳು ಕಾಣದಂತೆ ಅದರೊಳಗೆ ಬಿದ್ದು ಅಪಾಯಕ್ಕೊಳಗಾಗುವ ಸಾಧ್ಯತೆಯಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಶ್ರೀ ಶಿವಕುಮಾರ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಎನ್.ಡಬ್ಲ್ಯೂ-2 ಉಪವಿಭಾಗ ರವರಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಈ ಬಗ್ಗೆ ಸೂಕ್ಷ್ಮವಾಗಿ ಪರಿಗಣಿಸಿ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

11. <u>ಸಂಚಾರಿ ಪೊಲೀಸ್ ವಿಭಾಗದ ಬಗ್ಗೆ:-</u>

- ಶ್ರೀ ನಾಗರಾಜ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಉದಯರವಿ ಉದ್ಯಾನವನದ ಸುತ್ತಮುತ್ತ ವಾಹನಗಳನ್ನು ದಿನಪೂರ್ತಿ ನಿಲುಗಡೆ ಮಾಡುತ್ತಿರುವುದರಿಂದ ತೊಂದರೆ ಉಂಟಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.

ಮು.ಪು.ನೋ.

Scanned by CamScanner

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಅವಶ್ಯವಿದ್ದಲ್ಲಿ ನೋ ಪಾರ್ಕಿಂಗ್ ಬೋರ್ಡ್ ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳ ಬಗ್ಗೆ ಕ್ರಮವಹಿಸಿರುವ ಕುರಿತು ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

30/8/2022

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

**ಪ್ರತಿಯನ್ನು :-**

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ

Scanned by CamScanner